**Akashvani: Bangalore**
**National Bulletin in Kannada**
**23.03.2025 / 7.35 am**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**23.03.2025 / 7.35 am**

**<><*<><>*><>**

ಮುಖ್ಯಾಂಶಗಳು

೧. ದೆಹಲಿ ಹೈಕೋರ್ಟ್ ನ್ಯಾಯಮೂರ್ತಿ ಯಶವಂತ್ ವರ್ಮಾ ನಿವಾಸದಲ್ಲಿ ನಗದು ಪತ್ತೆ ಪ್ರಕರಣ; ಆಂತರಿಕ ತನಿಖಾ ವರದಿ ಬಿಡುಗಡೆಗೊಳಿಸಿದ ಸುಪ್ರೀಂಕೋರ್ಟ್

೨. ಏಪ್ರಿಲ್ ೧ ರಿಂದ ಜಾರಿಗೆ ಬರುವಂತೆ ಈರುಳ್ಳಿ ರಫ್ತಿನ ಮೇಲಿನ ಶೇಕಡ ೨೦ ರಷ್ಟು ಸುಂಕ ಕಡಿತಗೊಳಿಸಿದ ಕೇಂದ್ರ ಸರ್ಕಾರ

೩. ಲಕ್ನೋದಲ್ಲಿಂದು 'ಸೈಕಲ್‌ನಲ್ಲಿ ಫಿಟ್ ಇಂಡಿಯಾ ಭಾನುವಾರಗಳು' ರಾಷ್ಟ್ರವ್ಯಾಪಿ ಅಭಿಯಾನಕ್ಕೆ ಕೇಂದ್ರ ಸಚಿವ ಮನ್ಸೂಖ್ ಮಾಂಡವೀಯ ಚಾಲನೆ

೪. ಐಪಿಎಲ್ ಟಿ-೨೦ ಕ್ರಿಕೆಟ್; ಉದ್ಘಾಟನಾ ಪಂದ್ಯದಲ್ಲಿ ಕೋಲ್ಕತ್ತ ನೈಟ್ ರೈಡರ್ಸ್ ವಿರುದ್ಧ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಕ್ಕೆ ೭ ವಿಕೆಟ್‌ಗಳ ಭರ್ಜರಿ ಗೆಲುವು

**<><*<><>*><>**

ದೆಹಲಿ ಹೈಕೋರ್ಟ್ ನ್ಯಾಯಮೂರ್ತಿ ಯಶವಂತ್ ವರ್ಮಾ ಅವರ ನಿವಾಸದಲ್ಲಿ ಭಾರಿ ಪ್ರಮಾಣದ ನಗದು ಪತ್ತೆಯಾಗಿದೆ ಎಂಬ ಆರೋಪಕ್ಕೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ನಿನ್ನೆ ರಾತ್ರಿ ತನ್ನ ಜಾಲತಾಣದಲ್ಲಿ ಆಂತರಿಕ ತನಿಖಾ ವರದಿಯನ್ನು ಅಪ್‌ಲೋಡ್ ಮಾಡಿದೆ. ದೆಹಲಿ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ಡಿಕೆ ಉಪಾಧ್ಯಾಯ ಅವರು ಸಲ್ಲಿಸಿದ ತನಿಖಾ ವರದಿಯಲ್ಲಿ, ನಾಲ್ಕರಿಂದ ಐದು ಅರೆ ಸುಟ್ಟ ಭಾರತೀಯ ಕರೆನ್ಸಿಗಳ ರಾಶಿಗಳು ಪತ್ತೆಯಾಗಿವೆ ಎಂಬ ಅಧಿಕೃತ ದಾಖಲೆಗಳ ಬಗ್ಗೆ ಮಾಹಿತಿ ಇದೆ. ಮಾರ್ಚ್ ೧೪ ರ ಹೋಳಿ ಹಬ್ಬದ ರಾತ್ರಿ ನ್ಯಾಯಮೂರ್ತಿ ವರ್ಮಾ ಅವರ ನಿವಾಸದಲ್ಲಿ ನಡೆದ ಅಗ್ನಿಶಾಮಕ ಕಾರ್ಯಾಚರಣೆಯ ವೀಡಿಯೊಗಳು ಮತ್ತು ಛಾಯಾಚಿತ್ರಗಳನ್ನು ೨೫ ಪುಟಗಳ ತನಿಖಾ ವರದಿಯಲ್ಲಿ ಸೇರಿಸಲಾಗಿದೆ, ಕಾರ್ಯಾಚರಣೆಯ ಸಮಯದಲ್ಲಿ ನಗದು ವಶಪಡಿಸಿಕೊಳ್ಳಲಾಗಿದೆ. ವರದಿಯಲ್ಲಿ ಶಿಫಾರಸು ಮಾಡಿದಂತೆ, ಭಾರತದ ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ ಅವರು ನ್ಯಾಯಮೂರ್ತಿ ವರ್ಮಾ ವಿರುದ್ಧದ ಆರೋಪಗಳ

ತನಿಖೆಗಾಗಿ ಮೂವರು ಸದಸ್ಯರ ಆಂತರಿಕ ತನಿಖಾ ಸಮಿತಿಯನ್ನು ರಚಿಸಿದ್ದಾರೆ. ನ್ಯಾಯಮೂರ್ತಿ ವರ್ಮಾ ಅವರಿಗೆ ಯಾವುದೇ ನ್ಯಾಯಾಂಗ ಸೇವೆಯನ್ನು ನಿಯೋಜಿಸದಂತೆ ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ ಅವರು ದೆಹಲಿ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿಯವರಿಗೆ ನಿರ್ದೇಶನ ನೀಡಿದ್ದಾರೆ. ನ್ಯಾಯಮೂರ್ತಿ ವರ್ಮಾ, ತಾವು ಅಥವಾ ತಮ್ಮ ಕುಟುಂಬದ ಸದಸ್ಯರು ಯಾವುದೇ ಹಣವನ್ನು ಇಟ್ಟುಕೊಂಡಿಲ್ಲ ಎಂದು ಹೇಳಿದ್ದಾರೆ. ತಮ್ಮ ನಿವಾಸದಲ್ಲಿ ನಗದು ಪತ್ತೆಯಾಗಿರುವ ಕುರಿತ ಆರೋಪಗಳು ಸುಳ್ಳು ಆರೋಪಗಳಾಗಿದ್ದು, ತಮಗೆ ಅಪಖ್ಯಾತಿ ತರಲು ನಡೆಸಿದ ಪಿತೂರಿಯಂತೆ ಸ್ಪಷ್ಟವಾಗಿ ಕಂಡುಬರುತ್ತಿದೆ ಎಂದು ಅವರು ಹೇಳಿದರು. ನ್ಯಾಯಾಮೂರ್ತಿ ನಿವಾಸದಲ್ಲಿ ಆಕಸ್ಮಿಕವಾಗಿ ಸಂಭವಿಸಿದ ಬೆಂಕಿಯಲ್ಲಿ ಲೆಕ್ಕವಿಲ್ಲದ ಹಣ ಪತ್ತೆಯಾಗಿದೆ ಎಂದು ಮಾಧ್ಯಮ ವರದಿಗಳು ಈ ಹಿಂದೆ ತಿಳಿಸಿದವು. ಇದರ ನಂತರ, ಸುಪ್ರೀಂ ಕೋರ್ಟ್ ಪೀಠ, ನ್ಯಾಯಮೂರ್ತಿ ವರ್ಮಾ ಅವರನ್ನು ಅಲಹಾಬಾದ್ ಹೈಕೋರ್ಟ್‌ಗೆ ವಾಪಸ್ ಕಳುಹಿಸಲು ನಿರ್ಧರಿಸಿತು. ಆದಾಗ್ಯೂ, ಶುಕ್ರವಾರ ಸುಪ್ರೀಂ ಕೋರ್ಟ್ ನ್ಯಾಯಾಧೀಶರ ಸಭೆಯಲ್ಲಿ, ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಹೆಚ್ಚಿನ ಕ್ರಮದ ಅಗತ್ಯವಿದೆ ಎಂದು ಒಮ್ಮತ ವ್ಯಕ್ತವಾಗಿದೆ. ವರ್ಗಾವಣೆಯನ್ನು ಮೊದಲ ಹೆಜ್ಜೆಯಾಗಿಟ್ಟುಕೊಂಡು ನ್ಯಾಯಾಲಯ ಆಂತರಿಕ ತನಿಖೆಗೆ ಸರ್ವಾನುಮತದಿಂದ ಅನುಮೋದನೆ ನೀಡಿತು.

**<><*<><>*><>**

ಏಪ್ರಿಲ್ ೧ ರಿಂದ ಜಾರಿಗೆ ಬರುವಂತೆ ಈರುಳ್ಳಿ ರಫ್ತಿನ ಮೇಲಿನ ಶೇಕಡ ೨೦ ರಷ್ಟು ಸುಂಕವನ್ನು ಕೇಂದ್ರ ಸರ್ಕಾರ ರದ್ದುಗೊಳಿಸಿದೆ. ಈರುಳ್ಳಿ ದರವನ್ನು ಕೈಗೆಟಕುವಂತೆ ಕಾಯ್ದುಕೊಳ್ಳುವುದರ ಜೊತೆಗೆ ರೈತರಿಗೆ ಲಾಭದಾಯಕ ಬೆಲೆಗಳನ್ನು ಖಚಿತಪಡಿಸಲು ಈ ನಿರ್ಧಾರ ಸಹಕಾರಿಯಾಗಿದೆ ಎಂದು ಕೇಂದ್ರ ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣಾ ಸಚಿವಾಲಯ ತಿಳಿಸಿದೆ. ಹಿಂಗಾರು ಬೆಳೆಗಳು ಉತ್ತಮ ಪ್ರಮಾಣದಲ್ಲಿ ಬೆಳೆಯುವ ನಿರೀಕ್ಷೆ ಇರುವುದರಿಂದ ಈಗಾಗಲೇ ಮಂಡಿ ಮತ್ತು ಚಿಲ್ಲರೆ ಅಂಗಡಿಗಳಲ್ಲಿ ಬೆಲೆ ಕುಸಿತ ಕಂಡು ಬಂದಿದೆ. ಹಿಂಗಾರು ಋತುವಿನಲ್ಲಿ ಈರುಳ್ಳಿ ಸೇರಿದಂತೆ ಇತರ ಬೆಳೆಗಳ ಹೆಚ್ಚಿನ ಉತ್ಪಾದನೆ, ಮುಂಬರುವ ತಿಂಗಳುಗಳಲ್ಲಿ ಮಾರುಕಟ್ಟೆ ಬೆಲೆಗಳನ್ನು ಮತ್ತಷ್ಟು ಕಡಿಮೆ ಮಾಡುವ ನಿರೀಕ್ಷೆಯಿದೆ ಎಂದು ಸಚಿವಾಲಯ ತಿಳಿಸಿದೆ. ದೇಶೀಯ ಲಭ್ಯತೆಯನ್ನು ಖಚಿತಪಡಿಸಿಕೊಳ್ಳಲು ಕಳೆದ ವರ್ಷ ಸೆಪ್ಟಂಬರ್ ೧೩ ರಿಂದ ಶೇಕಡ ೨೦ ರಷ್ಟು ರಫ್ತು ಸುಂಕ ಜಾರಿಯಲ್ಲಿದೆ.

**<><*<><>*><>**

ಲಕ್ನೋದಲ್ಲಿ ಇಂದು ನಡೆಯಲಿರುವ 'ಸೈಕಲ್‌ನಲ್ಲಿ ಫಿಟ್ ಇಂಡಿಯಾ ಭಾನುವಾರಗಳು' ಎಂಬ ರಾಷ್ಟ್ರವ್ಯಾಪಿ ಅಭಿಯಾನದಲ್ಲಿ ಕೇಂದ್ರ ಯುವಜನ ವ್ಯವಹಾರ ಮತ್ತು ಕ್ರೀಡೆ ಸಚಿವ ಮನ್ಸುಖ್ ಮಾಂಡವಿಯಾ ಭಾಗವಹಿಸಲಿದ್ದಾರೆ. ಕೇಂದ್ರ ಸಚಿವರೊಂದಿಗೆ ಉತ್ತರ ಪ್ರದೇಶದ ರಾಜ್ಯಪಾಲರಾದ ಆನಂದಿಬೆನ್ ಪಟೇಲ್ ಮತ್ತು ಉತ್ತರ ಪ್ರದೇಶದ ಕ್ರೀಡಾ ಮತ್ತು ಯುವಜನ ವ್ಯವಹಾರಗಳ ಸಚಿವ ಗಿರೀಶ್ ಚಂದ್ರ ಯಾದವ್ ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.  ಏಷ್ಯನ್ ಕ್ರೀಡಾಕೂಟದ ಪದಕ ವಿಜೇತ ಜಾವೆಲಿನ್ ಎಸೆತಗಾರ ಕಿಶೋರ್ ಜೆನಾ ಮುಂಬೈನ ಅಕ್ಸಾ ಬೀಚ್‌ನಲ್ಲಿ ಸೈಕ್ಲಿಂಗ್ ಆಂದೋಲನದಲ್ಲಿ ಭಾಗವಹಿಸಲಿದ್ದರೆ, ಭಾರತೀಯ ದೈಹಿಕ ಶಿಕ್ಷಣ ಪ್ರತಿಷ್ಠಾನದ ಸದಸ್ಯರು ನವದೆಹಲಿಯಲ್ಲಿ ಈ ಉಪಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.ಈವರೆಗೆ, ದೇಶಾದ್ಯಂತ ೪ ಸಾವಿರದ ೨೦೦ ಸ್ಥಳಗಳಲ್ಲಿ ಸೈಕ್ಲಿಂಗ್ ಜಾಥಾಗಳನ್ನು ಆಯೋಜಿಸಲಾಗಿದ್ದು, ಸುಮಾರು ಎರಡು ಲಕ್ಷ ಜನರ ಭಾಗವಹಿಸುವಿಕೆ ದಾಖಲಿಸಿದೆ. ದೇಶಾದ್ಯಂತ ವಾಯು ಮಾಲಿನ್ಯ ಮಟ್ಟವನ್ನು ಕಡಿಮೆ ಮಾಡಲು ಈ ಆಂದೋಲನ ಪರಿಸರ ಸ್ನೇಹಿ ಅಭ್ಯಾಸಗಳನ್ನು ಉತ್ತೇಜಿಸುತ್ತದೆ. ವಿವಿಧ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಈ ಉಪಕ್ರಮವನ್ನು ನಡೆಸಲಾಗುತ್ತಿದ್ದು, ಸೈಕ್ಲಿಂಗ್ ಉತ್ಸಾಹಿಗಳು, ಕ್ರೀಡಾಪಟುಗಳು, ತರಬೇತುದಾರರು, ಕ್ರೀಡಾ ವಿಜ್ಞಾನ ತಜ್ಞರು ಇದರಲ್ಲಿ ಭಾಗವಹಿಸುತ್ತಿದ್ದಾರೆ. 'ಫಿಟ್ ಇಂಡಿಯಾ ಸಂಡೇಸ್ ಆನ್ ಸೈಕಲ್' ಅನ್ನು ಯುವಜನ ವ್ಯವಹಾರ ಮತ್ತು ಕ್ರೀಡಾ ಸಚಿವಾಲಯ, ಭಾರತೀಯ ಸೈಕ್ಲಿಂಗ್ ಫೆಡರೇಶನ್, ಮೈ ಬೈಕ್ಸ್ ಮತ್ತು ಮೈ ಭಾರತ್ ಸಹಯೋಗದೊಂದಿಗೆ ಆಯೋಜಿಸಿದೆ.

<><*<><>*><>

ಜಮ್ಮು ಮತ್ತು ಕಾಶ್ಮೀರದಲ್ಲಿ, ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ಅವರು ಇಂದು ಜಮ್ಮುವಿನ ಅಭಿನವ್ ರಂಗಮಂದಿರದಲ್ಲಿ "ತಾವಿ ಫಿಲ್ಮೋತ್ಸವ"ವನ್ನು ಉದ್ಘಾಟಿಸಲಿದ್ದಾರೆ.  ಜಮ್ಮು ಕಾಶ್ಮೀರ ಸಿನಿ ಅಸೋಸಿಯೇಷನ್ ಆಯೋಜಿಸಿರುವ ಈ ಕಾರ್ಯಕ್ರಮವು ಚಲನಚಿತ್ರ ನಿರ್ಮಾಪಕರು, ಕಲಾವಿದರು ಮತ್ತು ಸೃಜನಶೀಲ ವೃತ್ತಿಪರರಿಗೆ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ಉತ್ತಮ ವೇದಿಕೆಯನ್ನು ಒದಗಿಸುವ ಗುರಿಯನ್ನು ಹೊಂದಿದೆ. ಈ ಕಿರುಚಿತ್ರೋತ್ಸವ, ಉದಯೋನ್ಮುಖ ಪ್ರತಿಭೆಗಳನ್ನು ಬೆಂಬಲಿಸುವುದಲ್ಲದೆ, ಸಿನಿಮಾದ ಮೂಲಕ ಈ ಪ್ರಾಂತ್ಯದ ಶ್ರೀಮಂತ ಸಾಂಸ್ಕೃತಿಕ ಪರಂಪರೆಯನ್ನು ಉತ್ತೇಜಿಸುತ್ತದೆ. ಈ ಉತ್ಸವವು ಜಮ್ಮು ಮತ್ತು ಕಾಶ್ಮೀರದಲ್ಲಿ ಕಲಾತ್ಮಕ ಅಭಿವ್ಯಕ್ತಿಗೆ ಹೊಸ ಮಾನದಂಡವನ್ನು ನೀಡಲಿದೆ.  ಜೆಕೆಸಿಎ ನೇಮಿಸಿದ ನ್ಯಾಯಾಧೀಶರ ಸಮಿತಿಯು ಕಲಾಕೌಶಲ್ಯದ ಮೌಲ್ಯಮಾಪನ ಮಾಡುವುದರ ಜೊತೆಗೆ ಅಂತಿಮ ಫಲಿತಾಂಶಗಳನ್ನು ಇಂದು ಪ್ರಕಟಿಸಲಿದೆ.

<><*<><>*><>

ಅಮೆರಿಕದ ಸಿಯಾಟಲ್‌ನಲ್ಲಿ ಮೊದಲ ಭಾರತೀಯ ಚಲನಚಿತ್ರೋತ್ಸವ ಆರಂಭವಾಗಿದೆ. ಆ ಮೂಲಕ ಭಾರತೀಯ ಸಿನಿಮಾದ ಮೂರು ದಿನಗಳ ಆಚರಣೆಗೆ ಚಾಲನೆ ನೀಡಿದಂತಾಗಿದೆ. ಪಾಪ್ ಸಂಸ್ಕೃತಿ ವಸ್ತುಸಂಗ್ರಹಾಲಯದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ, ಪ್ರಧಾನಿ ನರೇಂದ್ರ ಮೋದಿ ಮತ್ತು ಲೆಕ್ಸ್ ಫ್ರಿಡ್‌ಮನ್ ಅವರ ಪಾಡ್‌ಕ್ಯಾಸ್ಟ್‌ನ ಆಯ್ದ ಭಾಗಗಳನ್ನು ಪ್ರದರ್ಶಿಸಲಾಯಿತು. ಇದು ಪ್ರಧಾನ ಮಂತ್ರಿಯವರ "ಭಾರತದ ಕಲ್ಪನೆ"ಯ ದೃಷ್ಟಿಕೋನದ ಕುರಿತಾಗಿತ್ತು.

<><*<><>*><>

ಅಮೆರಿಕದ, ನ್ಯೂ ಮೆಕ್ಸಿಕೋದ ಲಾಸ್ ಕ್ರೂಸಸ್‌ನ ಉದ್ಯಾನವನದಲ್ಲಿ ನಡೆದ ಅನಧಿಕೃತ ಕಾರು ಪ್ರದರ್ಶನದಲ್ಲಿ ಎರಡು ಪ್ರತಿಸ್ಪರ್ಧಿ ಗುಂಪುಗಳ ನಡುವೆ ನಡೆದ ಸಾಮೂಹಿಕ ಗುಂಡಿನ ದಾಳಿಯಲ್ಲಿ ಮೂವರು ಸಾವನ್ನಪ್ಪಿದ್ದು, ೧೫ ಮಂದಿ ಗಾಯಗೊಂಡಿದ್ದಾರೆ. ಸಾವನ್ನಪ್ಪಿದವರಲ್ಲಿ ಇಬ್ಬರು ೧೯ ವರ್ಷದ ಪುರುಷರು ಮತ್ತು ೧೬ ವರ್ಷದ ಬಾಲಕ ಸೇರಿದ್ದಾರೆ. ಈ ಹಿಂದಿನ ದ್ವೇಷವೇ ಎರಡೂ ಗುಂಪುಗಳ ನಡುವಿನ ಘರ್ಷಣೆಗೆ ಕಾರಣವೆಂದು ಲಾಸ್ ಕ್ರೂಸಸ್ ಪೊಲೀಸ್ ಮುಖ್ಯಸ್ಥರು ತಿಳಿಸಿದ್ದಾರೆ.

<><*<><>*><>

ಕೇಂದ್ರದ ವಾರ್ತಾ ಮತ್ತು ಪ್ರಸಾರ ಸಚಿವಾಲಯ, ಭಾರತ ಮಾಧ್ಯಮ ಮತ್ತು ಮನರಂಜನಾ ಸಂಘ ಸಹಯೋಗದೊಂದಿಗೆ ವಿಶ್ವ ಶ್ರವಣ, ದೃಶ್ಯ ಮತ್ತು ಮನರಂಜನಾ ಶೃಂಗಸಭೆ-W◌ಂಗಿಇS, ಕಾರ್ಯಕ್ರಮ ಮೇ ೧ ರಿಂದ ೪ ರವರೆಗೆ ಮುಂಬೈನಲ್ಲಿ ನಡೆಯಲಿದೆ. ಈ ಹಿನ್ನೆಲೆಯಲ್ಲಿ ವರ್ಲ್ಡ್ ಆಡಿಯೋ ವಿಷುವಲ್ ಎಂಟರ್ ಟೈನ್ ಮೆಂಟ್ ಸಮ್ಮಿಟ್ - ವೇವ್ಸ್ ವೇದಿಕೆಯಲ್ಲಿ ಮಕ್ಕಳು ಮತ್ತು ಹದಿಹರೆಯದವರ ಸೃಜನಶೀಲತೆಗೆ ಅವಕಾಶ ಕಲ್ಪಿಸಲಾಗಿದೆ. ೧೨ರಿಂದ ೧೫ ಹಾಗೂ ೧೬ರಿಂದ ೧೯ರ ವಯೋಮಾನದ ಎರಡು ವಿಭಾಗಗಳಲ್ಲಿ ಯುವಜನರು ತಮ್ಮ ನಿರ್ಮಾಣದ ಕಿರು ಚಿತ್ರಗಳನ್ನು ಸಲ್ಲಿಸಬಹುದಾಗಿದೆ. ೬೦ ಸೆಕೆಂಡ್ ಗಳ ಕಿರು ಚಿತ್ರದ ಈ ವಿಭಾಗದಲ್ಲಿ ಯುವಜನರ ಕಥನಕೌಶಲ್ಯ, ಡಿಜಿಟಲ್ ಸಾಕ್ಷರತೆ ಮತ್ತು ನಾವೀನ್ಯತೆಯ ಸಾಮರ್ಥ್ಯ ಪ್ರದರ್ಶನಕ್ಕೆ ಅವಕಾಶ ಕಲ್ಪಿಸಲಾಗಿದೆ.

<><*<><>*><>

ಬೋಟ್ಸ್ವಾನಾದಲ್ಲಿ ಉಂಟಾಗಿರುವ ಪ್ರವಾಹದ ಹಿನ್ನೆಲೆಯಲ್ಲಿ ಭಾರತ, ಆ ದೇಶಕ್ಕೆ ಮಾನವೀಯ ನೆರವು ನೀಡಿದೆ. ಅಗತ್ಯ ಔಷಧಗಳು, ಶಸ್ತ್ರಚಿಕಿತ್ಸಾ ಸರಬರಾಜುಗಳು, ಸೊಳ್ಳೆ ಪರದೆಗಳು ಮತ್ತು ನೀರಿನ ಶುದ್ಧೀಕರಣ ಯಂತ್ರಗಳನ್ನು ಒಳಗೊಂಡ ಸುಮಾರು ೧೦ ಟನ್‌ಗಳಷ್ಟು ಸಹಾಯದ ಮೊದಲ ಕಂತನ್ನು ಬೋಟ್ಸ್ವಾನಾಕ್ಕೆ ರವಾನಿಸಲಾಗಿದೆ ಎಂದು ವಿದೇಶಾಂಗ ಸಚಿವಾಲಯ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದೆ. ಏತನ್ಮಧ್ಯೆ, ದೇಶದ ಆರೋಗ್ಯ ವ್ಯವಸ್ಥೆಯನ್ನು ಬಲಪಡಿಸಲು

ಸಹಾಯ ಮಾಡಲು ಕಿರಿಬಾಟಿಗೆ ಮಾನವೀಯ ನೆರವು ಸಹ ಕಳುಹಿಸಲಾಗಿದೆ. ೬ ಹಾಸಿಗೆಗಳ ಕಂಟೇನರ್ ಆಧಾರಿತ ಡಯಾಲಿಸಿಸ್ ಘಟಕದ ಒಂದು ಸರಕು ನಿನ್ನೆ ಮುಂಡ್ರಾ ಬಂದರಿನಿಂದ ಕಿರಿಬಾಟಿಯ ತಾರಾವಾಕ್ಕೆ ತೆರಳಿದೆ.

<><*<><>*><>

ಕೊಲ್ಕತ್ತಾದ ಈಡನ್ ಗಾರ್ಡನ್ಸ್‌ನಲ್ಲಿ ನಿನ್ನೆ ನಡೆದ ಪ್ರತಿಷ್ಠಿತ ದೇಶೀಯ ಟಿ-೨೦ ಕ್ರಿಕೆಟ್ ಟೂರ್ನಿಯಾದ ಇಂಡಿಯನ್ ಪ್ರೀಮಿಯರ್ ಲೀಗ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ, ಕೋಲ್ಕತ್ತಾ ನೈಟ್ ರೈಡರ್ಸ್ ವಿರುದ್ಧ ೭ ವಿಕೆಟ್‌ಗಳ ಭರ್ಜರಿ ಜಯ ದಾಖಲಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ ಕೋಲ್ಕತ್ತಾ ನಿಗದಿತ ೨೦ ಓವರ್‌ಗಳಲ್ಲಿ ೮ ವಿಕೆಟ್ ನಷ್ಟಕ್ಕೆ ೧೭೪ ರನ್‌ಗಳಿಸಿತು. ಕೆಕೆಆರ್ ಪರ ಅಜಿಂಕ್ಯಾ ರಹನೆ ೫೬ ಹಾಗೂ ಸುನಿಲ್ ನರೇನ್ ೪೪ ರನ್ ಗಳಿಸಿದರು. ಆರ್‌ಸಿಬಿ ಪರ ಕೃನಾಲ್ ಪಾಂಡ್ಯ ೩ ಹಾಗೂ ಜಾಸ್ ಹೇಸಲ್‌ವುಡ್ ೨ ವಿಕೆಟ್ ಪಡೆದರು. ಇದಕ್ಕೆ ಪ್ರತ್ಯುತ್ತರವಾಗಿ ಆರ್‌ಸಿಬಿ, ಕೇವಲ ೧೬.೨ ಓವರ್‌ಗಳಲ್ಲಿ ೩ ವಿಕೆಟ್ ನಷ್ಟಕ್ಕೆ ೧೭೭ ರನ್‌ಗಳಿಸಿ ಗೆಲವು ತನ್ನದಾಗಿಸಿಕೊಂಡಿತು. ಆರ್‌ಸಿಬಿ ಪರ ವಿರಾಟ್ ಕೋಹ್ಲಿ ಅಜೇಯ ೫೯, ಫಿಲ್‌ಸಾಲ್ಟ್ ೫೬ ಹಾಗೂ ರಜತ್ ಪಾಟೀದಾರ್ ೩೪ ರನ್ ಗಳಿಸಿ, ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿದರು. ಉತ್ತಮ ಬೌಲಿಂಗ್ ಪ್ರದರ್ಶನಕ್ಕಾಗಿ ಆರ್‌ಸಿಬಿ ಯ ಕೃನಾಲ್ ಪಾಂಡ್ಯಗೆ ಪಂದ್ಯ ಶ್ರೇಷ್ಠ ಪ್ರಶಸ್ತಿ ನೀಡಲಾಯಿತು. ಇಂದು ೨ ಪಂದ್ಯಗಳು ನಡೆಯುತ್ತಿದ್ದು, ಹೈದರಾಬಾದ್‌ನ ರಾಜೀವ್ ಗಾಂಧಿ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆಯಲಿರುವ ಮೊದಲ ಪಂದ್ಯದಲ್ಲಿ ಸನ್ ರೈಸರ್ಸ್ ಹೈದರಾಬಾದ್ ಹಾಗೂ ರಾಜಸ್ಥಾನ ರಾಯಲ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಅಪರಾಹ್ನ ೩.೩೦ ಕ್ಕೆ ಆರಂಭವಾಗಲಿದೆ. ಎರಡನೇ ಪಂದ್ಯ ಚೆನ್ನೈ ಸೂಪರ್ ಕಿಂಗ್ಸ್ ಹಾಗೂ ಮುಂಬೈ ಇಂಡಿಯನ್ಸ್ ನಡುವೆ ಚೆನ್ನೈ ಎಂ.ಎ. ಚಿದಂಬರಂ ಕ್ರೀಡಾಂಗಣದಲ್ಲಿ ನಡೆಯಲಿದ್ದು, ಪಂದ್ಯ ರಾತ್ರಿ ೭.೩೦ ಕ್ಕೆ ಆರಂಭವಾಗಲಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ <>*><>